ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ: 21-09-2020 ರಂತೆ ದಿನಾಂಕ: 17-09-2022 ರಂದು ಹೊಸ ವಾರ್ಡ್ ಸಂಖ್ಯೆ:112 (ವರ್ತೂರು)ರ ವಾರ್ಡ್ ಕಮಿಟಿ ಸಭೆಯನ್ನು ಗುಂಜೂರು ಕ್ಲಬ್ ಇಲ್ಲಿ ಶ್ರೀ.ವೆಂಕಟೇಶ್.ಟಿ.ಎಂ, ಸಹಾಯಕ ಅಭಿಯಂತರರು ಹಾಗೂ ನೋಡಲ್ ಅಧಿಕಾರಿಗಳು, ರವರ ಅಧ್ಯಕ್ಷತೆಯಲ್ಲಿ ನಡೆದಿರುವ ಸಭೆಯ ನಡುವಳಿಗಳು:

ಈ ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ

1. ಶ್ರೀ ವೆಂಕಟೇಶ್.ಟಿ.ಎಂ, ಸಹಾಯಕ ಅಭಿಯಂತರರು, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ ಶ್ರೀನಿವಾಸಪ್ಪ, ಹಿರಿಯ ಆರೋಗ್ಯ ನಿರೀಕ್ಷಕರರು, ವಾರ್ಡ್ ವರ್ತೂರು, ಬಿ.ಬಿ.ಎಂ.ಪಿ
3. ಶ್ರೀ ಬಾಲಾಜಿ, ಕಿರಿಯ ಆರೋಗ್ಯ ನಿರೀಕ್ಷಕರರು, ವಾರ್ಡ್ ವರ್ತೂರು, ಬಿ.ಬಿ.ಎಂ.ಪಿ
4. ವರ್ತೂರು ವಾರ್ಡಿನ ಶಕ್ತಿ ಕೇಂದ್ರದವರು ಹಾಗೂ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದವರು ಮತ್ತು ಸಾರ್ವಜನಿಕರು

ಸಭೆಯಲ್ಲಿ ಹಾಜರಿದ್ದ ನೋಡಲ್ ಅಧಿಕಾರಿಗಳು -ಬಿಬಿಎಂಪಿ, ಹಿರಿಯ ಮತ್ತು ಕಿರಿಯ ಆರೋಗ್ಯ ನಿರೀಕ್ಷಕರು, ವರ್ತೂರು ವಾರ್ಡ್‌ನ ಶಕ್ತಿ ಕೇಂದ್ರದವರು ಹಾಗೂ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದವರು ಮತ್ತು ಸಾರ್ವಜನಿಕರು ಉಪಸ್ಥಿತಿಯಲ್ಲಿದ್ದು, ಹಿರಿಯ ಆರೋಗ್ಯ ನಿರೀಕ್ಷಕರು ಸ್ವಾಗತಾ ಕೋರಿದ ನಂತರ ನೋಡಲ್ ಅಧಿಕಾರಿಗಳು ಕಲಾಪವನ್ನು ಪ್ರಾರಂಭಿಸಲು ಸೂಚಿಸಿದರು.

*ಹಿಂದಿನ ಸಭೆಯಲ್ಲಿ ನಡೆದ ನಡವಳಿಗಳ ವರದಿಯನ್ನು ಅನುಷ್ಠಾನಗೊಂಡಿರುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮಾಹಿತಿಯನ್ನು ಪಡೆದು, ಸಾರ್ವಜನಿಕರ ಮುಂದೆ ಮಂಡಿಸಲಾಯಿತು.*

1. ಇತ್ತೀಚೆಗೆ ಬಿದ್ದ ಭಾರಿ ಮಳೆಯಿಂದಾಗಿ, ಮಧುರಾನಗರ ಮುಖ್ಯರಸ್ತೆಯಲ್ಲಿ, ಕಟ್ಟಡದ ಸಾಮಾಗ್ರಿಗಳು ಮಳೆ ನೊಂದಿಗೆ ಹರಿದು ಬಂದು, ಸಾರ್ವಜನಿಕರಿಗೆ ತೊಂದರೆಯಾಗಿರುವುದರ ಬಗ್ಗೆ.
   - ➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು ಹಾಗೂ ಆರೋಗ್ಯ ಶಾಖೆಯ ಸಿಬ್ಬಂದಿಗಳೊಂದಿಗೆ ಜಂಟಿಯಾಗಿ ಸೂಕ್ತ ಕ್ರಮ ಕೈಗೊಳ್ಳಾಗುವುದೆಂದು ತಿಳಿಸಿದರು.
2. ವರ್ತೂರು ವಾರ್ಡ್‌ನಲ್ಲಿ ಗ್ಯಾಂಗ್‌ಮ್ಯಾನ್‌ಗಳು ಸರಿಯಾಗಿ ಕರ್ತವ್ಯ ನಿರ್ವಹಿಸುತ್ತಿಲ್ಲ ಎಂಬುದರ ಬಗ್ಗೆ.
   - ➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.
3. ವರ್ತೂರು ಮುಖ್ಯರಸ್ತೆ-ಕೆರೆ ಬಳಿ ಹೆಚ್ಚಾಗಿ ರಸ್ತೆ ಗುಂಡಿಗಳು ಬಿದ್ದಿರುವ ಬಗ್ಗೆ.
   - ➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಸ.ಕಾ.ಅ (ಮೇಜರ್ ರೋಡ್ಸ್) ವಿಭಾಗದವರ ಗಮನಕ್ಕೆ ತಂದು, ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.
4. ಮೇಜರ್ ರೋಡ್ಸ್ ವಿಭಾಗದ ವತಿಯಿಂದ ವರ್ತೂರು ವಾರ್ಡ್‌ನಲ್ಲಿ ಅಂದಾಜುಪಟ್ಟಿಯಂತೆ ಕಾರ್ಯನಿರ್ವಹಿಸುತ್ತಿಲ್ಲವೆಂದು ತಿಳಿಸಿದರು.
   - ➢ ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಸ.ಕಾ.ಅ (ಮೇಜರ್ ರೋಡ್ಸ್) ವಿಭಾಗದವರ ಗಮನಕ್ಕೆ ತಂದು, ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.
5. ವರ್ತೂರು-ಮುತ್ತಸಂದ್ರ ರಸ್ತೆ ವರೆಗಿನ ಸಾರ್ವಜನಿಕರು ಪಾದಚಾರಿಗಳ ಫುಟ್‌ಪಾತ್‌ನ್ನು ಆಕ್ರಮಿಸಿಕೊಂಡು ಅಂಗಡಿ ಮುಂಗಟ್ಟುಗಳನ್ನು ಇಟ್ಟುಕೊಂಡು ಪಾದಚಾರಿಗಳಿಗೆ ತೊಂದರೆಯನ್ನುಂಟು ಮಾಡುತ್ತಿರುವುದರಿಂದ, ತೆರವು ಕಾರ್ಯಾಚರಣೆಯನ್ನು ಮಾಡಬೇಕಾಗಿರುವ ಬಗ್ಗೆ.
   - ➢ ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಫುಟ್‌ಪಾತ್ ತೆರವು ಕಾರ್ಯಾಚರಣೆಯನ್ನು ಮಾಡುವುದಾಗಿ ತಿಳಿಸಿದರು.

Scanned by CamScanner

6. ವಾರ್ಡ್ ವ್ಯಾಪ್ತಿಯಲ್ಲಿ ಪಿ.ಎಂ.ಸಿ ಕಡೆಯ ಸಿಬ್ಬಂದಿಗಳು ಸರಿಯಾದ ಗುಣಮಟ್ಟ ಕಾಪಾಡದೇ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಬಗ್ಗೆ.

- ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಪಿ.ಎಂ.ಸಿ ಕಡೆಯ ಮುಖ್ಯಸ್ಥರಿಗೆ ತಿಳಿಸಿ, ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

7. ಡಿ.ಎಲ್.ಪಿ ರಸ್ತೆಗಳು ದುರಸ್ತಿಯಾಗಿದ್ದು, ಇದನ್ನು ಕೂಡಲೇ ಸರಿಪಡಿಸಲು ಕೋರಿ.

- ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

8. ವರ್ತೂರು ಹಾಲುಬಾವಿ ರಸ್ತೆಯಲ್ಲಿ ಬೀದಿ ದೀಪಗಳನ್ನು ಅಳವಡಿಸಲು ಕೋರಿ.

- ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಬೆಸ್ಕಾಂ, ಸಹಾಯಕ ಅಭಿಯಂತರರಿಗೆ ಸೂಚಿಸಿ, ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

9. ಹಲಸಹಳ್ಳಿ ಮುಖ್ಯರಸ್ತೆಯ ಡಾಂಬರೀಕರಣ ಕಾಮಗಾರಿ ಸರಿಯಾಗಿ ಮಾಡದಿರುವುದರ ಬಗ್ಗೆ.

- ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಸಹಾಯಕ ಅಭಿಯಂತರರಿಗೆ (ಮೇಜರ್ ರೋಡ್ಸ್) ಸೂಚಿಸಿ, ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

10. ಸೋರಹುಣಸೆ ಗ್ರಾಮದಲ್ಲಿ ಕೊಳವೆ ಬಾವಿ ಕೊರೆಸಿ, ನೀರು ಪೂರೈಸಲು ಕೋರಿ.

- ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಗುತ್ತಿಗೆದಾರೊಂದಿಗೆ ಚರ್ಚಿಸಿ, ಕೊಳವೆ ಬಾವಿ ಕೊರೆಸಲು ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

11. ಸೋರಹುಣಸೆ ಮುಖ್ಯರಸ್ತೆ ಅಭಿವೃದ್ಧಿ ಪಡಿಸುವ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ, ಕಾಮಗಾರಿಯನ್ನು ಪ್ರಾರಂಭಿಸಲು ಕೋರಿ.

- ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಸಹಾಯಕ ಅಭಿಯಂತರರಿಗೆ (ಮೇಜರ್ ರೋಡ್ಸ್) ಸೂಚಿಸಿ, ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

12. ತಿಗಳರ ಬೀದಿಯ ರಸ್ತೆಯಲ್ಲಿ ಕುಡಿಯುವ ನೀರಿನ ಪೈಪ್ ಲೈನ್ ಅಳವಡಿಸಲು ಕೋರಿ.

- ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ಗುತ್ತಿಗೆದಾರೊಂದಿಗೆ ಚರ್ಚಿಸಿ, ಕೊಳವೆ ಸಾಲುಗಳನ್ನು ಹಾಕಲು ಸೂಕ್ತ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

13. ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಾಜಕಾಲುವೆಗಳನ್ನು ಸರ್ವೆ ಮಾಡಿಸಿ, ಗುರುತು ಮಾಡಿ ವರದಿ ನೀಡಲು ಮುಖ್ಯ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗಕ್ಕೆ ಪತ್ರ ಬರೆದು, ಮಾಹಿತಿ ಪಡೆಯಲು ಕೋರಿ.

- ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ರವರು ಬೃಹತ್ ನೀರುಗಾಲುವೆ ವಿಭಾಗಕ್ಕೆ ಪತ್ರ ಬರೆಯಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

14. ವರ್ತೂರು ಸರ್ವೆ ನಂ.156ರಲ್ಲಿ ರಾಜಕಾಲುವೆ ಇದ್ದು, ಒತ್ತುವರಿ ಮಾಡಿರುವ ಬಗ್ಗೆ ಸರ್ವೆ ಮಾಡಿಸಿ, ಗುರುತು ಮಾಡಿ ವರದಿ ನೀಡಲು ಮುಖ್ಯ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗಕ್ಕೆ ಪತ್ರ ಬರೆದು, ಮಾಹಿತಿ ಪಡೆಯಲು ಕೋರಿ.

- ಸದರಿ ವಿಷಯಕ್ಕೆ ಸಹಾಯಕ ಅಭಿಯಂತರರು, ರವರು ಬೃಹತ್ ನೀರುಗಾಲುವೆ ವಿಭಾಗಕ್ಕೆ ಪತ್ರ ಬರೆಯಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

15. ಬಳಗೆರೆ-ಪಣತ್ತೂರು ರಸ್ತೆ ಜಂಕ್ಷನ್‌ನಲ್ಲಿ ಟ್ರಾಫಿಕ್ ಪೊಲೀಸ್‌ನ್ನು ನಿಯೋಜಿಸಲು ಕೋರಿ.

- ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಟ್ರಾಫಿಕ್ ಪೊಲೀಸ್ ಠಾಣೆಗೆ ಪತ್ರ ಬರೆಯುವುದಾಗಿ ತಿಳಿಸಿದರು.

Scanned by CamScanner

16. ವರ್ತೂರು ಬರುವಾಗುಂಟೆ ರಸ್ತೆಯಲ್ಲಿ ಬೀದಿ ದೀಪಗಳನ್ನು ಅಳವಡಿಸಲು ಕೋರಿ.

- ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಬೆಸ್ಕಾಂ, ಸಹಾಯಕ ಅಭಿಯಂತರರಿಗೆ ಸೂಚಿಸಿ, ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

17. ವಾರ್ಡ್ ಸಭೆಗೆ ಕೆ.ಆರ್.ಡಿ.ಸಿ.ಎಲ್, ಬೃಹತ್ ನೀರುಗಾಲುವೆ ವಿಭಾಗ, ಬೆಸ್ಕಾಂ, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಮೇಜರ್ ರೋಡ್ಸ್ ಇಲಾಖೆಯ ಅಧಿಕಾರಿಗಳು ಗೈರು ಹಾಜರಾಗುತ್ತಿರುವ ಬಗ್ಗೆ.

- ಸದರಿ ವಿಷಯಕ್ಕೆ ನೋಡಲ್ ಅಧಿಕಾರಿಗಳು, ಇಲಾಖೆಗಳ ಮುಖ್ಯಸ್ಥರ ಗಮನಕ್ಕೆ ತರಲಾಗುವುದು ಎಂದು ತಿಳಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಳ್ಳುವಂತೆ ಹಾಗೂ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳಿಗೆ ಸಮನ್ವತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿರುತ್ತಾರೆ. ನೋಡಲ್ ಅಧಿಕಾರಿ ರವರ ಸೂಚನೆಯಂತೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
**ಸಹಾಯಕ ಅಭಿಯಂತರರು**
**ವಾರ್ಡ್ ನಂ: 112**

**ಪ್ರತಿಯನ್ನು**

1. ಮಾನ್ಯ ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ ಮಹದೇವಪುರ ವಲಯ,ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು, ಬಿ.ಬಿ.ಎಂ.ಪಿ ಮಹದೇವಪುರ ವಲಯ, ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಡಿ.ಹೆಚ್.ಓ ಬಿ.ಬಿ.ಎಂ.ಪಿ ಮಹದೇವಪುರ ವಲಯ, ರವರ ಸೂಕ್ತ ಮಾಹಿತಿ/ಕ್ರಮಕ್ಕಾಗಿ ಸಲ್ಲಿಸಿದೆ.
4. ಎಲ್ಲಾ ಅಧಿಕಾರಿ ಸಿಬ್ಬಂದಿಗಳ ಕ್ರಮಕ್ಕಾಗಿ.
5. ಎಲ್ಲಾ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
6. ಕಛೇರಿ ಪ್ರತಿ.

Scanned by CamScanner